ಮೈಸೂರ ಗೆಜೆಟ್ಟ

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಮೇ ತಾ॥ 21, ಸ್ಯ 1887.

ಈ ಭಾಗವನ್ನು ಪ್ರತ್ಯೇಕ ಕೆರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ಗಿರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫಿನ್ಯಾಷಿಯಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಪರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಷ್ಟೇಸ್‌ಮೆಂಟ್ ಯಾನೇ ಪರಾ ಬಗ್ಯೆ ಇದರಡಿ ರುಜೂ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಟಿಕೇಟೂದ ಡಿಮಾಂಡ್ ಡ್ರಾಫ್‌ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸನ್,
ಕಾಂಪ್‌ಟ್ರೋಲರ್.

ಬೆಂಗಳೂರು ಡಿಸ್ಟ್ರಿಕ್ಟು.

ಬೆಂಗಳೂರು ಸಬ್ ಜಡ್ಜ್ರೀಯವರ ಕೋರ್ಟಿನಲ್ಲಿ.

ದಿವಾಳಿಯಾದ ಡಿಕ್ರೀದೇಣೇದಾರ ಕಿಲ್ಲಘಟ್ಟ ತಾಲ್ಲೂಕು ಗಂಜಿಗುಂಟೆ ಹೋಬಳಿ ಚಿಕ್ಕ ಬರದರಗಟ್ಟದಲ್ಲಿ ಯಿರುವ ದೊಡ್ಡ ಬೈರಡ್ಡಿಯ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳಿ ಕೇಸ್ ನಂಬರು 44.

ಹುಕ್ಕುಂ.

ಮೇಲ್ಕಂಡ ದೊಡ್ಡ ಬೈರಡ್ಡಿಯು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಕವು ಬೆಂಗಳೂರು ಸಬ್ ಜಡ್ಜ್ರೀಯವರಾದ ಮೆ॥ ಕೈಸ್ ಸಾಹೇಬರವರ ರೂಬರೂ ಅರ್ಜೀದಾರನಾದ ಸದರೀಯವನ ಪರವಾಗಿ ಅಡ್ವೊಕೇಟ್ ರಾಮಸ್ವಾಮಯ್ಯಂಗಾರ್ರನ್ನು ದರ್ಯಾಫ್ತ್ ಮಾಡಲ್ಪಟ್ಟಿತು.